## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ /ಕಾರ್ಯದರ್ಶಿಗಳ ಉಪಯೋಗಕ್ಕಾಗಿ ಸಿಆಸುಇ (ಇ-ಆಡಳಿತ) ಒದಗಿಸಿರುವ ಐಪ್ಯಾಡ್‌ಗೆ ಇಂಟರ್‌ನೆಟ್ ಸೌಲಭ್ಯ ಒದಗಿಸುವ ನಿಮಿತ್ತ ಸಂಭವಿಸುವ ಮಾಸಿಕ ಗರಿಷ್ಠ ರೂ.1500/- ಮೊತ್ತವನ್ನು ಭರಿಸಲು ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ ರವರ ಟಿಪ್ಪಣಿ ಸಂಖ್ಯೆ:ಸಿಆಸುಇ 113 ಪ್ರಕಾ 2012, ದಿನಾಂಕ:16-04-2012,

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಟಿಪ್ಪಣಿಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳ ಉಪಯೋಗಕ್ಕಾಗಿ ಇ-ಆಡಳಿತ ಇಲಾಖೆಯು ನೀಡಿರುವ ಐಪ್ಯಾಡ್‌ಗೆ ಮೊಬೈಲ್ ಫೋನ್ ಕಂಪನಿಗಳಿಂದ (ಏರ್‌ಟೆಲ್, ಬಿ.ಎಸ್.ಎನ್.ಎಲ್. ಐಡಿಯಾ ಮುಂತಾದವು) ಇಂಟರ್‌ನೆಟ್ ಸೌಲಭ್ಯವನ್ನು ಪಡೆಯುವುದರಿಂದ ಇದಕ್ಕೆ ತಗಲುವ ಮಾಸಿಕ ಗರಿಷ್ಠ ವೆಚ್ಚ ರೂ.1500/- (ರೂ. ಒಂದು ಸಾವಿರದ ಐದು ನೂರು ಮಾತ್ರ) ಗಳನ್ನು ಪಾವತಿಸುವುದಕ್ಕೆ ಅಥವಾ ಹಿಂಬರಿಸುವುದಕ್ಕೆ ಸಂಬಂಧಿಸಿದಂತೆ ಪರಿಶೀಲಿಸಲು ಸೂಚಿಸಿರುತ್ತಾರೆ. ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ಪರಿಶೀಲಿಸಲಾಗಿದ್ದು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 141 ಡಿಟಿಎನ್ 2012, ಬೆಂಗಳೂರು.**
**ದಿನಾಂಕ:15-05-2012**

ಪ್ರಸ್ತಾವನೆಯಲ್ಲಿನ ವಿವರಣೆಯ ಹಿನ್ನೆಲೆಯಲ್ಲಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳ ಉಪಯೋಗಕ್ಕಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಇ-ಆಡಳಿತ) ಒದಗಿಸಿರುವ ಐಪ್ಯಾಡ್‌ಗಳಿಗೆ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಈ ಸೌಲಭ್ಯಕ್ಕೆ ತಗಲುವ ಮಾಸಿಕ ವೆಚ್ಚವನ್ನು ಗರಿಷ್ಟ ರೂ.1500/- (ರೂಪಾಯಿ ಒಂದು ಸಾವಿರದ ಐದು ನೂರು ಮಾತ್ರ) ಗಳ ಮಿತಿಗೊಳಪಟ್ಟು ಹಿಂಬರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

-------2

ಈ ವೆಚ್ಚವನ್ನು ಆಯವ್ಯಯ ಲೆಕ್ಕಶೀರ್ಷಿಕೆ "2052-00-090-0-01-051" (ಯೋಜನೇತರ) ಇದರಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 404 ವೆಚ್ಚ-12/2012, ದಿನಾಂಕ:10-05-2012 ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಸ್.ಮಂಜುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಕಾರ್ಯಕಾರಿ)
15/05

ಗೆ:

1) ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಬೆಂಗಳೂರು
2) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ
4) ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಲೆಕ್ಕಪತ್ರ-1 ಮತ್ತು 2)
5) ಸರ್ಕಾರದ ಅಧೀನ ಕಾರ್ಯದರ್ಶಿ(ವೆಚ್ಚ-12) ಆರ್ಥಿಕ ಇಲಾಖೆ
6) ಖಜಾನಾಧಿಕಾರಿ, ಕರ್ನಾಟಕ ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
7) ಡಿ.ಸಿ. ಬಿಲ್ಲು ಪ್ರತಿ